# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 111 | Pages. 2 | Date: 03-04-2026, FRIDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 111 – ಪುಟಗಳು : 2 | 03-04-2026 | ಶುಕ್ರವಾರ | Ph: 8762954248 | ದರ : ₹1


# ಕೊಲೆ ಆರೋಪಿಗೆ ಹಾಸ್ಟೆಲ್ ಶೆಲ್ಟರ್

## ವರುಣ್ ಕೊಲೆ ಆರೋಪಿ ತಂಗಿದ್ದ ನಿಲಯ | ಪೊಲೀಸರಿಂದ ಸ್ಥಳ ಮಹಜರು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಬಡ ಮಕ್ಕಳ ಶೈಕ್ಷಣಿಕ ಪ್ರಗತಿಗೆ ನೆರವಾಗಲೆಂದು ಸರ್ಕಾರ ಕೋಟ್ಯಂತರ ರೂಪಾಯಿ ಖರ್ಚು ಮಾಡಿ ನಿರ್ವಹಿಸುತ್ತಿರುವ ವಸತಿ ನಿಲಯಗಳು ಕೊಲೆಗಡುಕರ ಆಶ್ರಯ ತಾಣವಾಗಿ ಮಾರ್ಪಟ್ಟಿದೆ ಎಂದರೆ ನಂಬಲೇಬೇಕು.

ಹೌದು, ನಗರದ ಆಕಾಶವಾಣಿ ಹಿಂಭಾಗದಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ



ಮಾ. 13ರಂದು ದುದ್ದ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದ ವರುಣ್ ಎಂಬ ಕೊಲೆ ಆರೋಪಿ ವಾಸ್ತವ್ಯ ಹೂಡಿದ್ದ ಎಂಬುದು ನಂಬಲು ಕಷ್ಟವಾದರೂ ಸತ್ಯ. ಈಗಾಗಲೇ ಅರೆಸ್ಟ್ ಆಗಿರುವ ಶಶಾಂಕ್ ಅಂಡ್ ಗ್ಯಾಂಗ್ ಅಂದರೆ ಒಟ್ಟು 8 ಮಂದಿ ಸೇರಿ ವರುಣ್‌ನನ್ನು ರಾತ್ರಿಯಿಡೀ ಅಮಾನವೀಯವಾಗಿ ಥಳಿಸಿ ಕೊಲೆಗೈದಿದ್ದರು.

ಆ 8 ಮಂದಿಯಲ್ಲಿ ಒಬ್ಬನಾದ ಪೃಥ್ವಿಕ್ ಎಂಬ ಆರೋಪಿ, ಅಪರಾಧದಲ್ಲಿ ಭಾಗಿಯಾದ ಬಳಿಕ ನಗರದ ಸರ್ಕಾರಿ ಹಾಸ್ಟೆಲ್‌ನಲ್ಲಿ ತಲೆಮರೆಸಿಕೊಂಡು ಆಶ್ರಯ ಪಡೆದಿದ್ದ.

ಕೊಲೆ ಪ್ರಕರಣದ ತನಿಖೆ ನಡೆಸುತ್ತಿರುವ ಪೊಲೀಸರು ಹಾಸ್ಟೆಲ್ ಮೇಲೆ ದಾಳಿ ನಡೆಸಿ ಪ್ರಮುಖ ಸಾಕ್ಷ್ಯಗಳನ್ನು ವಶಕ್ಕೆ ಪಡೆದಿದ್ದಾರೆ. ಬಡ ಮಕ್ಕಳಿಗೆ ಆಶ್ರಯ ನೀಡಿ, ಅಕ್ಷರ ಕಲಿಸಲು ನೆಲೆಯಾಗಿರುವ ಹಾಸ್ಟೆಲ್‌ಗಳನ್ನು ಅಪರಾಧ, ಅಕ್ರಮ ಚಟುವಟಿಕೆಗಳಿಗೆ ಬಳಸಿಕೊಳ್ಳುತ್ತಿರುವುದು ನಿಜಕ್ಕೂ ವ್ಯವಸ್ಥೆಯ ದುರಂತವೇ ಸರಿ. ಇನ್ನಾದರೂ ಇದನ್ನು ಹೋಗಲಾಡಿಸಲು ಸಂಬಂಧಪಟ್ಟವರು ಕಠಿಣ ಕ್ರಮಕ್ಕೆ ಮುಂದಾಗಬೇಕಿದೆ. ಇಲ್ಲದಿದ್ದರೆ ನಿಜವಾಗಿ ಕಲಿತು, ಉಜ್ವಲ ಭವಿಷ್ಯ ಕಂಡು ಕೊಳ್ಳಬೇಕು ಎಂಬ ಕನಸು ಹೊತ್ತು ಬರುವ ವಿದ್ಯಾರ್ಥಿಗಳೂ ಅಪರಾಧಿ ಸ್ಥಾನದಲ್ಲಿ ನಿಲ್ಲಬೇಕಾಗುತ್ತದೆ.

**ಸೂತ್ರಧಾರರಿಗೆ ಶಿಕ್ಷೆಯಾಗಬೇಕಿದೆ**

ಈ ಘಟನೆಯನ್ನು ಇಲ್ಲಿಗೇ ಬಿಟ್ಟು ಮೈ ಮರೆಯುವಂತಿಲ್ಲ. ಸರ್ಕಾರಿ ವಸತಿ ನಿಲಯಗಳ ಭದ್ರತೆ, ಮೇಲ್ವಿಚಾರಣೆ ಹಾಗೂ ನಿಯಂತ್ರಣ ವ್ಯವಸ್ಥೆ ಜವಾಬ್ದಾರಿ ಹೊತ್ತಿರುವವರನ್ನು ಪ್ರಶ್ನೆಗೆ ಒಳಪಡಿಸಬೇಕಿದೆ. ಅಪರಾಧಿಕಾರಿಗಳಿಗೆ ಆಶ್ರಯ ನೀಡಿದ್ದು ಯಾರು, ಲೋಪ ಯಾರದು ಎಂಬುದನ್ನು ಪತ್ತೆ ಹಚ್ಚುವ ಮೂಲಕ ಅಂಥವರನ್ನು ದಂಡಿಸಬೇಕಿದೆ. ಈ ಮೂಲಕ ಹಾಸ್ಟೆಲ್‌ಗಳಿಗೆ ಅಂಟಿರುವ ಕಳಂಕ ತೊಡೆದು ಹಾಕಬೇಕಿದೆ. ಪ್ರಮುಖವಾಗಿ ವಿದ್ಯಾರ್ಥಿಗಳ ಸುರಕ್ಷತೆ ಹಾಗೂ ಶಿಸ್ತು ಕಾಪಾಡಲು ಸಂಬಂಧಪಟ್ಟ ಮೇಲಧಿಕಾರಿಗಳು ತಕ್ಷಣ ಕ್ರಮ ಕೈಗೊಳ್ಳಬೇಕು ಎಂಬುದು ಪೋಷಕರು ಸೇರಿದಂತೆ ಎಲ್ಲರ ಆಗ್ರಹವಾಗಿದೆ.





## ಮೂಲ ಸ್ಥಾನಕ್ಕೆ ಬಿಸಿಎಂ ಹಾಸ್ಟೆಲ್ ಪ್ರಭಾರ ವಾರ್ಡನ್

ಹಾಸನ: ವಿದ್ಯಾರ್ಥಿಗೆ ಊಟ ನೀಡದೆ ಟೀಕೆಗೆ ಗುರಿಯಾಗಿದ್ದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವಸತಿ ನಿಲಯದ ಪ್ರಭಾರ ವಾರ್ಡನ್ ಶ್ರೀಕಂಠೇಗೌಡ ಅವರನ್ನು ಹೆಚ್ಚುವರಿ ಜವಾಬ್ದಾರಿಯಿಂದ ವಜಾಗೊಳಿಸಿ ಮೂಲ ಸ್ಥಾನಕ್ಕೆ ಕಳುಹಿಸಲಾಗಿದೆ.

ಊಟದ ವಿಚಾರವಾಗಿ ಕೊಪ್ಪಳ ಮೂಲದ ವಿದ್ಯಾರ್ಥಿ ಪರವಾಗಿ ಎರಡು ದಿನಗಳ ಹಿಂದೆ 60ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರತಿಭಟನೆ ನಡೆಸಿದ್ದರು. ಮಾರನೇ ದಿನ ಸ್ಥಳಕ್ಕೆ ಶಾಸಕ ಹೆಚ್.ಪಿ.ಸ್ವರೂಪ್, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ತಾಲ್ಲೂಕು ಅಧ್ಯಕ್ಷ ಬನವಾಸೆ ರಂಗಸ್ವಾಮಿ ಭೇಟಿ ನೀಡಿ ಪರಿಶೀಲಿಸಿದ್ದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಜಿ.ಎಂ.ಕುಮಾರ್ ಅವರು ಪ್ರಕರಣದ ಪೂರ್ವಾಪರ ಪರಿಶೀಲಿಸಿ ವಿದ್ಯಾರ್ಥಿ ನಿಲಯದ ಸುಗಮ ನಿರ್ವಹಣೆಯಲ್ಲಿ ವಿಫಲವಾಗಿರುವುದು ಹಾಗೂ ಆಡಳಿತಾತ್ಮಕ ಹಿತದೃಷ್ಟಿಯಿಂದ ಶ್ರೀಕಂಠೇಗೌಡ ಅವರನ್ನು ಹೆಚ್ಚುವರಿ ಜವಾಬ್ದಾರಿಯಿಂದ ತೆಗೆದು ಹಾಕಿದ್ದಾರೆ. ಆ ಸ್ಥಾನಕ್ಕೆ ಆಡುವಳ್ಳಿ ವಸತಿ ನಿಲಯದ ವಾರ್ಡನ್ ಆಗಿರುವ ಭಾನುಪ್ರಕಾಶ್ ಅವರನ್ನು ನಿಯೋಜಿಸಿ ಆದೇಶಿಸಲಾಗಿದೆ. ಶ್ರೀಕಂಠೇಗೌಡ ಅವರ ಮೂಲ ಸ್ಥಾನ ಮುತ್ತಿಗೆ ಹಿರೇಹಳ್ಳಿ ವಸತಿ ನಿಲಯ (ದ್ವಿತೀಯ ದರ್ಜೆ ಸಹಾಯಕ) ಆಗಿದ್ದು ಅಲ್ಲಿಗೆ ನಿಯೋಜನೆ ಮಾಡಿ ಆದೇಶಿಸಲಾಗಿದೆ.

## ಗೆಳೆಯನ ನೆರವಿನಿಂದ ಹಾಸ್ಟೆಲ್‌ಗೆ ಬಂದಿದ್ದ

ಚಿಕ್ಕಮಗಳೂರು ಮೂಲದ ಆರೋಪಿ ಪೃಥ್ವಿಕ್ ಎಂಬಾತ ವಿದ್ಯಾರ್ಥಿ ನಿಲಯದಲ್ಲಿ ವಾಸ್ತವ್ಯ ಮಾಡಿದ್ದ. ಈ ಹಿನ್ನೆಲೆಯಲ್ಲಿ ಮೂರು ದಿನಗಳ ಹಿಂದೆ ಬಡಾವಣೆ ಠಾಣೆ ಪೊಲೀಸರು ಆತನನ್ನು ವಸತಿ ನಿಲಯಕ್ಕೆ ಕರೆದುಕೊಂಡು ಬಂದು ಸ್ಥಳ ಮಹಜರು ನಡೆಸಿದ್ದಾರೆ.

ಘಟನೆ ನಡೆದು ವಾರದ ಬಳಿಕ ಪ್ರಕರಣ ಭೇದಿಸಿದ್ದ ಪೊಲೀಸರು ಐವರು ಆರೋಪಿಗಳನ್ನು ಬಂಧಿಸಿದ್ದರು. ಗೋವಾದಲ್ಲಿ ತಲೆ ಮರೆಸಿಕೊಂಡಿದ್ದ ಪ್ರಮುಖ ಆರೋಪಿ ಶಶಾಂಕ್ ಸಹ ಘಟನೆ ನಡೆದು 10 ದಿನಗಳ ಬಳಿಕ ಪೊಲೀಸರ ಬಂಧಿಯಾಗಿದ್ದಾನೆ. ಮತ್ತೊಬ್ಬ ಆರೋಪಿ ಪೃಥ್ವಿಕ್‌ನನ್ನು ಇತ್ತೀಚೆಗೆ ಬಂಧಿಸಲಾಗಿತ್ತು. ವಸತಿ ನಿಲಯದಲ್ಲಿ ತಾನು ರಾತ್ರಿ ಕಳೆದರೆ ಯಾರಿಗೂ ಸಂಶಯ ಬರುವುದಿಲ್ಲ ಎಂಬುದು ಪೃಥ್ವಿಕ್ ಲೆಕ್ಕಾಚಾರವಾಗಿತ್ತು. ಅದಕ್ಕಾಗಿ ಇದೇ ಹಾಸ್ಟೆಲ್‌ನಲ್ಲಿ ಎರಡು ವರ್ಷಗಳ ಹಿಂದೆ ಓದಿದ್ದ ಸಕಲೇಶಪುರ ಮೂಲದ ಗೆಳೆಯನನ್ನು ಸಂಪರ್ಕಿಸಿ ಇವತ್ತೊಂದು ದಿನ ರಾತ್ರಿ ಉಳಿಯಲು ಸಹಾಯ ಮಾಡು ಎಂದು ಕೇಳಿದ್ದ.

ಯಾವುದೇ ಪೂರ್ವಾಪರ ತಿಳಿಯದೆ ಹಳೆಯ ಗೆಳೆಯ ಪ್ರಸ್ತುತ ವಸತಿ ನಿಲಯದಲ್ಲಿರುವ ತನ್ನ ಗೆಳೆಯರಿಗೆ ಕರೆ ಮಾಡಿ ಒಂದು ದಿನ ವಾಸ್ತವ್ಯದ ವ್ಯವಸ್ಥೆ ಮಾಡಿಕೊಡುವಂತೆ ಕೋರಿದ್ದ ಎನ್ನಲಾಗಿದೆ.

## ಚನ್ನರಾಯಪಟ್ಟಣ ಸಾಯಿ ಮಂದಿರದಲ್ಲಿ ವಿಶೇಷ ಪೂಜೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಪಟ್ಟಣದ ಶಿರಡಿ ಸಾಯಿ ಮಂದಿರ 7ನೇ ವಾರ್ಷಿಕೋತ್ಸವ ಗುರುವಾರ ಸಕಲ ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಅಪಾರ ಭಕ್ತರ ಸಮ್ಮುಖದಲ್ಲಿ ನಡೆಯಿತು.

ಸಾಯಿ ಬಾಬಾ ಮಂದಿರದ ಮುಖ್ಯಸ್ಥ ಸಾಯಿ ಸೇವಕ ಪ್ರಭಾ ಕಾಚೇನಹಳ್ಳಿ ಹಾಗೂ ಭಕ್ತರು ಕಳೆದ ಒಂದು ತಿಂಗಳಿಂದ ಶ್ರಮಿಸಿ ಅದ್ದೂರಿ ಪೂಜೆ ಮತ್ತು ಶಿರಡಿ ಮೂಲ ಸನ್ನಿಧಾನದಲ್ಲಿ ಪೂಜೆ ಸಲ್ಲಿಸಿದ ನಾಣ್ಯಗಳನ್ನು ಪ್ರಸಾದ ರೂಪದಲ್ಲಿ ಭಕ್ತರಿಗೆ ವಿತರಿಸಿ ಪ್ರಸಾದದ ವ್ಯವಸ್ಥೆ ಮಾಡಿದ್ದರು.

ವಾರ್ಷಿಕೋತ್ಸವ ಹಿನ್ನಲೆಯಲ್ಲಿ ಬೆಳಿಗ್ಗೆ 4.30 ಗಂಟೆಗೆ ಶ್ರೀ ಸಾಯಿ ಬಾಬಾ ಅವರಿಗೆ ಕಾಕಡ ಆರತಿ, 5ಕ್ಕೆ ಅಭಿಷೇಕ, 6 ಗಂಟೆಗೆ ವಿಶೇಷ ಅಲಂಕಾರ ಮಾಡಲಾಯಿತು. ಸಂಜೆ 6 ಗಂಟೆಗೆ ಧೂಪಾರತಿ ಮತ್ತು ರಾತ್ರಿ 9ಕ್ಕೆ ಶೇಜಾರತಿ ಧಾರ್ಮಿಕ ಕಾರ್ಯಕ್ರಮವನ್ನು ಹಾಗು ವಿಶೇಷ ಅಲಂಕಾರ ಹಮ್ಮಿಕೊಳ್ಳಲಾಗಿತ್ತು.

ವಿಶಾಲ ಪ್ರಾಂಗಣದಲ್ಲಿರುವ ಬಾಬಾ ಅವರ ಮೂರ್ತಿಗೆ ಸಾವಿರಾರು ಜನರು ಶಾಲು, ಹೂವಿನ ಹಾರ ಹಾಕಿ ದರ್ಶನ ಪಡೆದರು. ಅನೇಕರು ನೈವೇದ್ಯ, ಶಾಲು, ಬಟ್ಟೆಗಳನ್ನು ಅರ್ಪಿಸುವ ಮೂಲಕ ಹರಕೆ ತೀರಿಸಿದರು.

ವಾರ್ಷಿಕೋತ್ಸವ ನಿಮಿತ್ತ ದೇವಾಲಯವನ್ನು ಹೂವು ಹಾಗೂ ದೀಪಾಲಂಕಾರದಿಂದ ಝಗಮಗಿಸುತ್ತಿತ್ತು. ದೇವಾಲಯ ಆವರಣ ಮತ್ತು ಹೊರ ರಸ್ತೆಗಳು ಭಕ್ತರಿಂದ ಕಿಕ್ಕಿರಿದು ತುಂಬಿತ್ತು. ಸುತ್ತಮುತ್ತ ವಾಹನಗಳನ್ನು ನಿಲ್ಲಿಸಲಾಗಿತ್ತು. ಮಂದಿರದ ಮುಂದಿನ ಬಯಲು ಜಾಗದಲ್ಲಿ ಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು. ಬೆಳಿಗ್ಗೆ 11 ರಿಂದ ಆರಂಭಗೊಂಡ ಪ್ರಸಾದ ವಿತರಣೆ ರಾತ್ರಿ 10.30ರ ವರೆಗೆ ನಡೆಯಿತು. ಗುರುವಾರವಾದ್ದರಿಂದ ಸಾಯಿಬಾಬಾ ಮಂದಿರದಲ್ಲಿ ಜಾತ್ರೆ, ಸಂಭ್ರಮ ಮನೆ ಮಾಡಿತ್ತು. ಭಕ್ತರ ಅನುಕೂಲಕ್ಕಾಗಿ ಸರತಿ ಸಾಲಿನಲ್ಲಿ ದರ್ಶನಕ್ಕೆ ಬರಲು ವಿಶೇಷ ಸ್ಥಳಾವಕಾಶ ಮಾಡಲಾಗಿತ್ತು.

ಶಾಸಕ ಸಿ.ಎನ್.ಬಾಲಕೃಷ್ಣ, ರಾಜ್ಯ ಮಾರಾಟ ಮಹಾಮಂಡಳದ ನಿರ್ದೇಶಕ ಸಿ.ಎನ್.ಪುಟ್ಟಸ್ವಾಮಿ, ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ವಿಜಯಕುಮಾರ್, ಯೋಜನಾ ಪ್ರಾಧಿಕಾರದ ಮಾಜಿ ಅಧ್ಯಕ್ಷ ಅಣತಿ ಆನಂದ ಮತ್ತಿತರರಿದ್ದರು.

# ಪೊಲೀಸರು ಆರೋಗ್ಯಕ್ಕೆ ಆದ್ಯತೆ ನೀಡಿ: ವೆಂಕಟೇಶ್ ನಾಯ್ಡು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸದಾ ಒತ್ತಡದಲ್ಲೇ ಇರುವ ಪೊಲೀಸರು ಆರೋಗ್ಯಕ್ಕೆ ಒತ್ತು ನೀಡಬೇಕು ಹಾಗೂ ನಿವೃತ್ತಿ ಬಳಿಕ ಸಿಗುವ ಸವಲತ್ತುಗಳನ್ನು ಪಡೆಯಬೇಕು ಎಂದು ನಿವೃತ್ತ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕೆ.ಎಸ್.ವೆಂಕಟೇಶ್ ನಾಯ್ಡು ಸಲಹೆ ನೀಡಿದರು.



ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ನಗರದ ಡಿಎಆರ್ ಮೈದಾನದಲ್ಲಿ ಗುರುವಾರ ಏರ್ಪಡಿಸಿದ್ದ ಪೊಲೀಸ್ ಧ್ವಜ ದಿನಾಚರಣೆಯಲ್ಲಿ ಮಾತನಾಡಿದ ಅವರು, ಪ್ರತಿ ಹಂತದಲ್ಲಿ ಪೊಲೀಸರ ಅವಶ್ಯಕತೆ ಹೆಚ್ಚಿದೆ. ಕೆಲಸದೊತ್ತಡದಿಂದ ಅನೇಕರು ಅನಾರೋಗ್ಯಕ್ಕೀಡಾಗಿದ್ದಾರೆ. ನಾವು ಎಷ್ಟೇ ಪ್ರಾಮಾಣಿಕತೆಯಿಂದ ಕೆಲಸ ಮಾಡಿದರೂ ಇಲ್ಲಸಲ್ಲದ ಆರೋಪಗಳನ್ನು ಹೊರೆಸುತ್ತಾರೆ. ಏನೇ ಲೋಪದೋಷಗಳಾದರೂ ಪೊಲೀಸರನ್ನೇ ಹೊಣೆಗಾರರನ್ನಾಗಿಸುವ ಕೆಲಸಗಳು ನಡೆಯುತ್ತಲೇ ಇವೆ. ಎಲ್ಲಾ ಕೆಲಸವನ್ನು ಪೊಲೀಸರೇ ಮಾಡುವುದಾದರೆ ಬೇರೆ ಇಲಾಖೆಗಳು ಏಕೆ ಇರಬೇಕೆಂದು ಪ್ರಶ್ನಿಸಿದರು.

ಸೇವೆಯಲ್ಲಿರುವಾಗ ನಾವು ಯಾವುದರ ಬಗ್ಗೆಯೂ ತಲೆ ಕೆಡಿಸಿಕೊಳ್ಳುವುದಿಲ್ಲ. ನಿತ್ಯವೂ ಕೆಲಸದಲ್ಲೇ ಮುಳುಗಿರುತ್ತೇವೆ. ಆದರೆ, ನಿವೃತ್ತಿ ಬಳಿಕ ಉತ್ತಮ ಬದುಕು ಸಾಗಿಸಲು ಹಣ ಉಳಿತಾಯ ಮಾಡಿಕೊಳ್ಳಬೇಕು. ಆರೋಗ್ಯ ಭಾಗ್ಯ ಯೋಜನೆಯಡಿ ನಿವೃತ್ತಿ ಬಳಿಕ 3 ಲಕ್ಷ ರೂ. ಮಾತ್ರ ಪರಿಹಾರ ಬರುತ್ತದೆ. ಆದ್ದರಿಂದ ತಪ್ಪದೇ ಎಲ್ಲರೂ ಆರೋಗ್ಯ ವಿಮೆ ಮಾಡಿಸಿಕೊಳ್ಳಬೇಕು. ಪ್ರಿಮಿಯಂ ಕಟ್ಟದೆ ಬಾಕಿ ಇರುವವರು ನಿರ್ಲಕ್ಷ್ಯ ವಹಿಸದೆ ಹಣ ಪಾವತಿಸಿ ಭವಿಷ್ಯವನ್ನು ಸದೃಢವಾಗಿಟ್ಟುಕೊಳ್ಳಬೇಕು ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭಾನ್ವಿತಾ ಮಾತನಾಡಿ, ಪೊಲೀಸರು ತುಂಬಾ ಕಠಿಣ ಪರಿಸ್ಥಿತಿಯಲ್ಲಿ ಸಮರ್ಪಣಾ ಭಾವದಿಂದ ಕೆಲಸ ಮಾಡುತ್ತಾರೆ. ಆದ್ದರಿಂದಲೇ ಕರ್ನಾಟಕ ಪೊಲೀಸ್‌ಗೆ ದೇಶದಲ್ಲೇ ಒಳ್ಳೆಯ ಹೆಸರಿದೆ ಎಂದರು.

1662 ಏಪ್ರಿಲ್ 2 ರಿಂದ ಧ್ವಜ ದಿನಾಚರಣೆ ಜಾರಿಗೆ ಬಂದಿದೆ. ಈ ದಿನ ಪೊಲೀಸ್ ಧ್ವಜ ಮಾರಾಟ ಮಾಡಿದ ಹಣವನ್ನು ನಿವೃತ್ತ ಪೊಲೀಸರ ಆರೋಗ್ಯ ಹಾಗೂ ಮೃತಪಟ್ಟವರ ಅಂತ್ಯಕ್ರಿಯೆಗೆ ಬಳಸಲಾಗುತ್ತದೆ. ಕಳೆದ ವರ್ಷ ಸಂಗ್ರಹವಾಗಿದ್ದ 2 ಲಕ್ಷ ರೂ. ಹಣದಲ್ಲಿ 19 ಪೊಲೀಸರ ಅಂತ್ಯ ಸಂಸ್ಕಾರಕ್ಕೆ ನೀಡಲಾಗಿದೆ ಎಂದರು. ಹೆಚ್ಚುರಿ ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿಧಿ ಇದ್ದರು.

# ಕ್ಷೇತ್ರ ಅಭಿವೃದ್ಧಿಗೆ ಹೋರಾಟ ನಿರಂತರ: ಶಾಸಕ ಸುರೇಶ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಶಿಲ್ಪಕಲೆಗಳ ತವರೂರಾದ ಬೇಲೂರು ಹಾಗೂ ಹಳೇಬೀಡು ಪಟ್ಟಣ ಅಭಿವೃದ್ಧಿಗೆ ಎಷ್ಟೇ ಬಾರಿ ಆಗ್ರಹಿಸಿದರೂ ಸರ್ಕಾರ ನಿರ್ಲಕ್ಷ್ಯ ತೋರುತ್ತಿದೆ. ಕ್ಷೇತ್ರ ಅಭಿವೃದ್ಧಿಗೆ ನಿರಂತರ ಹೋರಾಟ ಮಾಡುತ್ತೇನೆ ಎಂದು ಶಾಸಕ ಹೆಚ್.ಕೆ.ಸುರೇಶ್ ಹೇಳಿದರು.



ಶ್ರೀ ಚನ್ನಕೇಶವಸ್ವಾಮಿ ಜಾತ್ರಾ ಮಹೋತ್ಸವ ಅಂಗವಾಗಿ ಚನ್ನಕೇಶವ ದೇಗುಲ ಆವರಣದಲ್ಲಿ ಜಯ ಕರ್ನಾಟಕ ಸಂಘಟನೆಯಿಂದ ಬುಧವಾರ ರಾತ್ರಿ ಆಯೋಜಿಸಿದ್ದ 15ನೇ ವರ್ಷದ ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಬೇಲೂರು-ಹಳೇಬೀಡು ಅಭಿವೃದ್ಧಿ ಪ್ರಾಧಿಕಾರಕ್ಕಾಗಿ ಒತ್ತಾಯಿಸಿದ್ದಲ್ಲದೆ, ಖಾಸಗಿ ಬಿಲ್ ಸಹ ಮಂಡಿಸಿದ್ದೆ. ಆದರೆ ಸರ್ಕಾರ ಗಮನ ಕೊಟ್ಟಿಲ್ಲ. ಮುಂದಿನ ದಿನಗಳಲ್ಲಿ ಈ ನಿಟ್ಟಿನಲ್ಲಿ ಸರ್ಕಾರದ ಗಮನ ಸೆಳೆಯುತ್ತೇನೆಂದು ಭರವಸೆ ನೀಡಿದರು.

ಮಾ. 31 ಹಾಗೂ ಏ. 1ರಂದು ನಡೆದ ರಥೋತ್ಸವ ಯಾವುದೇ ವಿಘ್ನವಿಲ್ಲದೆ ಸಂಪ್ರದಾಯಬದ್ಧವಾಗಿ ನೆರವೇರಿದೆ. ಇದಕ್ಕೆ ಸಹಕರಿಸಿದ ಎಲ್ಲರನ್ನು ಅಭಿನಂದಿಸುತ್ತೇನೆ. 900 ವರ್ಷಗಳ ಇತಿಹಾಸ ಹೊಂದಿರುವ ಚನ್ನಕೇಶವ ಸ್ವಾಮಿ ದೇವಾಲಯದ ಪಾವಿತ್ರ್ಯತೆ ಕಾಪಾಡುವುದು ಎಲ್ಲರ ಕರ್ತವ್ಯವಾಗಿದೆ ಎಂದರು.

ನಾಡು ನುಡಿ ರಕ್ಷಣೆ ವಿಚಾರದಲ್ಲಿ ಜಯ ಕರ್ನಾಟಕ ಸಂಘಟನೆ ಸಾಕಷ್ಟು ಹೋರಾಟ ಮಾಡಿಕೊಂಡು ಬಂದಿದೆ. ಕಾಡಾನೆಗಳ ಹಾವಳಿ ನಿಯಂತ್ರಣಕ್ಕೆ ಆಗ್ರಹಿಸಿ ಹಾಸನದಲ್ಲಿ ಐದು ದಿನಗಳ ವರೆಗೆ ನಡೆದ ಪ್ರತಿಭಟನೆಯಲ್ಲಿ ಭಾಗವಹಿಸಿದ್ದೆ. ಮುಂದಿನ ದಿನಗಳಲ್ಲಿ ಸಂಘಟನೆ ಇನ್ನೂ ಉತ್ತಮ ಕೆಲಸ ಮಾಡಲಿ ಎಂದು ಆಶಿಸಿದರು.

ಜಯ ಕರ್ನಾಟಕ ಸಂಘಟನೆ ರಾಜ್ಯ ಪ್ರಧಾನ ಕಾರ್ಯದರ್ಶಿ ರಜತ್ ಮಾತನಾಡಿ, ನಮ್ಮ ಸಂಘಟನೆ ನಾಡು ನುಡಿ, ನೆಲ ಜಲ ಸೇರಿ ಹಲವಾರು ಕಾರ್ಯಕ್ರಮದ ಜೊತೆಗೆ ಅನ್ಯಾಯದ ವಿರುದ್ಧ ನಿರಂತ ಹೋರಾಟ, ನ್ಯಾಯ ಕೊಡಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದೆ. ಬೇಲೂರಿನಲ್ಲಿ ಜಾತ್ರಾ ಮಹೋತ್ಸವ ವೇಳೆ ಕಳೆದ 15 ವರ್ಷಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಿಕೊಂಡು ಬಂದಿದ್ದೇವೆಂದರು.

ಪತ್ರಕರ್ತರ ಸಂಘದ ತಾಲ್ಲೂಕು ಅಧ್ಯಕ್ಷ ಬಿ.ಬಿ.ಶಿವರಾಜ್ ಮಾತನಾಡಿ, ಪಟ್ಟಣದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲು ಕಲಾ ಭವನದ ಅವಶ್ಯಕತೆ ಇದ್ದು ಶಾಸಕರು ಗಮನ ಹರಿಸಬೇಕು.

ಜಾತ್ರೆಗೆ ಆಗಮಿಸುವ ಭಕ್ತರ ಅನುಕೂಲಕ್ಕಾಗಿ ಇನ್ನೂ ಹೆಚ್ಚಿನ ಸೌಲಭ್ಯಗಳನ್ನು ಒದಗಿಸಸಬೇಕಿದೆ ಎಂದರು.

ಜಯ ಕರ್ನಾಟಕ ಸಂಘಟನೆ ತಾಲ್ಲೂಕು ಅಧ್ಯಕ್ಷ ಎಸ್.ಎಂ.ರಾಜು ಮಾತನಾಡಿ, ನಮ್ಮ ಸಂಘಟನೆಯಿಂದ ಸಾರ್ವಜನಿಕ ಪರವಾದ ಸಾಕಷ್ಟು ಹೋರಾಟ ಮಾಡಿದ್ದೇವೆ. ಜಾತ್ರಾ ಮಹೋತ್ಸವ ಸಾಂಸ್ಕೃತಿಕ ಹಬ್ಬದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದವರನ್ನು ಗುರುತಿಸಿ, ಸನ್ಮಾನಿಸುತ್ತಿದ್ದೇವೆ. ಮುಂದಿನ ದಿನಗಳಲ್ಲಿ ಆರೋಗ್ಯ ಶಿಬಿರ ಆಯೋಜಿಸುವ ಗುರಿ ಹೊಂದಿದ್ದೇವೆ ಎಂದರು.

ಪತ್ರಕರ್ತರ ಸಂಘದ ತಾಲ್ಲೂಕು ಅಧ್ಯಕ್ಷ ಬಿ.ಬಿ.ಶಿವರಾಜ್, ಪುರಸಭೆ ಆರೋಗ್ಯಾಧಿಕಾರಿ ಲೋಹಿತ್, ನಿವೃತ್ತ ಸೈನಿಕ ಜಿ.ಬಿ.ವೆಂಕಟೇಶಗೌಡ, ಎಪಿಎಂಸಿ ಮಾಜಿ ಅಧ್ಯಕ್ಷ ಹೊಸಳ್ಳಿ ಕುಮಾರ್ ಅವರನ್ನು ಸನ್ಮಾನಿಸಲಾಯಿತು.

## ಏ. 5 ರಂದು ಬಾಬು ಜಗಜೀವನ್ ರಾಮ್ ಜಯಂತಿ

ಹಾಸನ: ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಸಮಾಜ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆಯ ಸಹಯೋಗದಲ್ಲಿ ಏ. 5 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ.ಬಿ.ಆರ್ ಅಂಬೇಡ್ಕರ್ ಭವನದಲ್ಲಿ ಡಾ. ಬಾಬು ಜಗಜೀವನ್ ರಾಮ್ ಜಯಂತಿ ಆಯೋಜಿಸಲಾಗಿದೆ.

ಜಿಲ್ಲಾ ಉಸ್ತುವಾರಿ ಸಚಿವರಾದ ಕೃಷ್ಣ ಭೈರೇಗೌಡ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಶಾಸಕರಾದ ಕೆ.ಎಂ. ಶಿವಲಿಂಗೇಗೌಡ, ಸ್ವರೂಪ್ ಪ್ರಕಾಶ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಹೊಳೆನರಸೀಪುರದ ನಿವೃತ್ತ ಉಪನ್ಯಾಸಕ ಎ.ಎಸ್. ಗಿರೀಶ್ ಉಪನ್ಯಾಸ ನೀಡಲಿದ್ದಾರೆ. ಬೆಳಿಗ್ಗೆ 10 ಗಂಟೆಗೆ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಮೆರವಣಿಗೆಗೆ ಚಾಲನೆ ನೀಡಲಾಗುವುದು.

## ಹಾಡ ಹಗಲೇ ಚಿನ್ನಾಭರಣ ಕಳವು

ಹೊಳೆನರಸೀಪುರ: ಮನೆ ಬೀಗ ಮುರಿದು ಒಳನುಗ್ಗಿರುವ ಕಳ್ಳರು ಬೀರುವಿನಲ್ಲಿಟ್ಟಿದ್ದ 10 ಗ್ರಾಂ ತೂಕದ ಚಿನ್ನಾಭರಣ ಹಾಗೂ 10 ಸಾವಿರ ರೂ. ನಗದು ಕಳವು ಮಾಡಿರುವ ಘಟನೆ ಸಿದ್ದಾರ್ಥ ನಗರದಲ್ಲಿ ನಡೆದಿದೆ. ಕೆ.ಹೆಚ್.ನೇತ್ರಾವತಿ ಎಂಬುವವರ ಮನೆಯಲ್ಲಿ ಮಾ. 31ರ ಸಂಜೆ 4ರ ಸಮಯದಲ್ಲಿ ಕಳ್ಳತನವಾಗಿದೆ. ಮನೆಯಲ್ಲಿ ಯಾರೂ ಇಲ್ಲದಿರುವುದನ್ನು ಖಚಿತಪಡಿಸಿಕೊಂಡು ಒಳ ಪ್ರವೇಶಿಸಿರುವ ಕಳ್ಳರು ಬೀರುವಿನಲ್ಲಿಟ್ಟಿದ್ದ 10 ಗ್ರಾಂ ತೂಕದ ಚಿನ್ನಾಭರಣ, ನಗದು ಕದ್ದಿದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪ್ರತ್ಯೇಕ ಅಪಘಾತ ಯುವಕ ಸೇರಿ ಇಬ್ಬರ ಸಾವು

ಹಾಸನ: ಜಿಲ್ಲೆಯ ವಿವಿಧ ಠಾಣೆ ವ್ಯಾಪ್ತಿಯಲ್ಲಿ ನಡೆದ ಪ್ರತ್ಯೇಕ ರಸ್ತೆ ಅಪಘಾತದಲ್ಲಿ ಇಬ್ಬರು ಮೃತಪಟ್ಟಿದ್ದಾರೆ.

ಕಾರು ಡಿಕ್ಕಿಯಾಗಿ ಬೈಕ್ ಸವಾರ ಮೃತಪಟ್ಟಿರುವ ಘಟನೆ ನಗರದ ಬಿ.ಕಾಟಿಹಳ್ಳಿ ವೃತ್ತದಲ್ಲಿ ನಡೆದಿದೆ. ದುದ್ದ ಹೋಬಳಿ ಹೆರಗು ಗ್ರಾಮದ ಕೃಷ್ಣಮೂರ್ತಿ ಮೃತರು. ಬುಧವಾರ ಕೆಲಸದ ನಿಮಿತ್ತ ಬೈಕ್‌ನಲ್ಲಿ ಬರುತ್ತಿದ್ದಾಗ ಎದುರುಗಡೆಯಿಂದ ವೇಗವಾಗಿ ಬಂದ ಕಾರು ಚಾಲಕ ಡಿಕ್ಕಿ ಮಾಡಿದ್ದಾನೆ. ಅಪಘಾತದಲ್ಲಿ ಗಂಭೀರ ಗಾಯಗೊಂಡಿದ್ದ ಕೃಷ್ಣಮೂರ್ತಿ ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತಾದರೂ ಚಿಕಿತ್ಸೆ ಫಲಿಸದೆ ತಡರಾತ್ರಿ ಮೃತಪಟ್ಟಿದ್ದಾರೆ. ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮತ್ತೊಂದು ಪ್ರಕರಣದಲ್ಲಿ ಟ್ರ್ಯಾಕ್ಟರ್ ಡಿಕ್ಕಿಯಾಗಿ ಯುವಕ ಮೃತಪಟ್ಟಿರುವ ಘಟನೆ ಹೊಳೆನರಸೀಪುರ ತಾಲ್ಲೂಕಿನ ರಂಗೇನಹಳ್ಳಿ ಕೆರೆಯಲ್ಲಿ ನಡೆದಿದೆ.

ಕೆ.ಆರ್.ಪೇಟೆ ತಾಲ್ಲೂಕು ಹೊನ್ನೇನಹಳ್ಳಿ ಗ್ರಾಮದ ಹೆಚ್.ಡಿ.ಸುಮಂತ್ (18) ಮೃತ ದುರ್ದೈವಿ. ರಂಗೇನಹಳ್ಳಿಯ ಪರಮೇಶ ಅವರ ಜಮೀನಿಗೆ ಕೆರೆಯಿಂದ ಮಣ್ಣು ತುಂಬಿಸುತ್ತಿದ್ದಾಗ ಸುಮಂತ್ ಜೆಸಿಬಿ ಹತ್ತಿರ ನಿಂತಿದ್ದ. ಅದೇ ಸಮಯಕ್ಕೆ ಮಣ್ಣು ಲೋಡ್ ಮಾಡಿಕೊಳ್ಳಲು ವೇಗವಾಗಿ ಬಂದ ಟ್ರ್ಯಾಕ್ಟರ್ ಚಾಲಕ ಸುಮಂತ್‌ನಿಗೆ ಡಿಕ್ಕಿ ಮಾಡಿದ್ದಾನೆ. ತಕ್ಷಣವೇ ಹೊಳೆನರಸೀಪುರ ಆಸ್ಪತ್ರೆಗೆ ಕರೆತರಲಾಯಿತಾದರೂ ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದಾನೆ. ಹಳ್ಳಿಮೈಸೂರು ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಮರ್ಪಕ ರಸಗೊಬ್ಬರ ಬಳಕೆ ಕುರಿತು ಮನವಿ

ಹಾಸನ: ಜಿಲ್ಲೆಯ ವಾರ್ಷಿಕ ವಾಡಿಕೆ ಮಳೆ 1100 ಮಿ.ಮೀ ನಷ್ಟಿದ್ದು, ಪ್ರಸಕ್ತ 2026-27ನೇ ಸಾಲಿನಲ್ಲಿ ಜಿಲ್ಲೆಗೆ ವಾಡಿಕೆಯಂತೆ ಈ ಬಾರಿಯೂ ಉತ್ತಮ ಮಳೆಯಾಗುವ ನಿರೀಕ್ಷೆಯಿದೆ. ಆದ್ದರಿಂದ ರೈತರು ರಸಗೊಬ್ಬರ ಬಳಸುವಾಗ ಮುಂಜಾಗ್ರತೆ ವಹಿಸಬೇಕೆಂದು ಕೃಷಿ ಇಲಾಖೆ ಜಂಟಿ ನಿರ್ದೇಶಕ ಪಿ.ರಮೇಶ್‌ಕುಮಾರ್ ಹೇಳಿದ್ದಾರೆ.

ಕೃಷಿ ಉತ್ಪಾದನೆಯನ್ನು ಹೆಚ್ಚಿಸಲು ರಸಗೊಬ್ಬರಗಳ ಬಳಕೆ ಅಗತ್ಯವಾದರೂ, ಅತಿಯಾದ ಅಥವಾ ಅಸಮರ್ಪಕ ಬಳಕೆ ಮಣ್ಣಿನ ಆರೋಗ್ಯ ಹಾನಿ ಮಾಡುತ್ತದೆ. ಪರಿಸರದ ಮೇಲೆ ದುಷ್ಪರಿಣಾಮ ಬೀರುತ್ತದೆ. ಆದ್ದರಿಂದ ರೈತರು ರಾಸಾಯನಿಕ ಗೊಬ್ಬರಗಳನ್ನು ಸಮರ್ಪಕವಾಗಿ ಮತ್ತು ಸಮತೋಲನದಿಂದ ಬಳಸುವ ಮೂಲಕ, ಹೆಚ್ಚಿನ ಉತ್ಪಾದನೆ ಸಾಧಿಸಬಹುದಾಗಿರುತ್ತದೆ.

ರಸಗೊಬ್ಬರಗಳ ಮೇಲಿನ ವೆಚ್ಚವನ್ನು ಕಡಿಮೆ ಮಾಡಬಹುದಾಗಿರುತ್ತದೆ, ಮಣ್ಣಿನ ದೀರ್ಘಕಾಲೀನ ಆರೋಗ್ಯ ಕಾಪಾಡಬಹುದಾಗಿರುತ್ತದೆ ಮತ್ತು ಪರಿಸರ ಸಂರಕ್ಷಣೆ ಸಾಧಿಸಬಹುದಾಗಿದೆ. ಜಿಲ್ಲೆಯ ಬೆಳೆ ಪದ್ಧತಿ ಆಧರಿಸಿ ಮುಂಗಾರು ಹಂಗಾಮಿಗೆ 1,38,683 ಮೆಟ್ರಿಕ್ ಟನ್ ರಸಗೊಬ್ಬರದ ಬೇಡಿಕೆಯಿದ್ದು, ಪ್ರಮುಖವಾಗಿ ಯೂರಿಯಾ 51,313 ಮೆಟ್ರಿಕ್ ಟನ್, ಡಿ.ಎ.ಪಿ. 14,652 ಮೆಟ್ರಿಕ್ ಟನ್, ಎಂ.ಓ.ಪಿ 9,061 ಮೆಟ್ರಿಕ್ ಟನ್ ಎನ್.ಪಿ.ಕೆ. 61,645 ಮೆಟ್ರಿಕ್ ಟನ್ ಎಸ್.ಎಸ್.ಪಿ. 2,102 ಮೆಟ್ರಿಕ್ ಟನ್ ರಸಗೊಬ್ಬರ ಬೇಡಿಕೆ ಇರುತ್ತದೆ. ಜಿಲ್ಲೆಯ ಚಿಲ್ಲರೆ ಮತ್ತು ಸಗಟು ಮಾರಾಟಗಾರರಲ್ಲಿ ಮಾರ್ಚಿ 2026 ರ ಅಂತ್ಯದವರೆಗೆ 64,000 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನಿರುತ್ತದೆ. ಪ್ರಮುಖವಾಗಿ ಯೂರಿಯಾ 10018 ಮೆಟ್ರಿಕ್ ಟನ್, ಡಿ.ಎ.ಪಿ. 8047 ಮೆಟ್ರಿಕ್ ಟನ್, ಎನ್.ಪಿ.ಕೆ ಕಾಂಪ್ಲೆಕ್ಸ್ 38542 ಮೆಟ್ರಿಕ್ ಟನ್, ಎಮ್.ಒ.ಪಿ, 5361 ಮೆಟ್ರಿಕ್ ಟನ್, ಎಸ್.ಎಸ್.ಪಿ 2020 ಮೆಟ್ರಿಕ್ ಟನ್ ರಸಗೊಬ್ಬರಗಳು ದಾಸ್ತಾನಿರುತ್ತದೆ. ರಸಗೊಬ್ಬರಕ್ಕೆ ಯಾವುದೇ ಕೊರತೆ ಇರುವುದಿಲ್ಲ ಹಾಗೂ ರಸಗೊಬ್ಬರಗಳನ್ನು ಪರವಾನಗಿ ಹೊಂದಿದ ಕೃಷಿ ಪತ್ತಿನ ಸಹಕಾರ ಸಂಘಗಳು/ಖಾಸಗಿ ಮಾರಾಟಗಾರರಿಂದ ಖರೀದಿಸುವಂತೆ ತಿಳಿಸಿದ್ದಾರೆ.

# ಹಾಸನದಲ್ಲಿ ಎಡಪಕ್ಷಗಳಿಂದ ಕರಾಳ ದಿನ ಆಚರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಹಾಸನ: ಕರಾಳ ಕಾರ್ಮಿಕ ಸಂಹಿತೆಗಳಿಗೆ ಕೇಂದ್ರ ಸರ್ಕಾರ ನಿಯಮಗಳನ್ನು ಜಾರಿಗೆ ತರುತ್ತಿರುವುದನ್ನು ವಿರೋಧಿಸಿ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿಯಿಂದ ಪ್ರತಿಭಟನೆ ಮೂಲಕ ಕರಾಳ ದಿನಾಚರಣೆ ಆಚರಿಸಲಾಯಿತು.

ನಗರದ ಮಹಾವೀರ ವೃತ್ತದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು ಕಪ್ಪು ಬಟ್ಟೆ ಪ್ರದರ್ಶನ ಮಾಡಿ, ಕೇಂದ್ರ ಸರ್ಕಾರದ ವಿರುದ್ಧ ಘೋಷಣೆಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಏ. 1 ರಿಂದ ಕೇಂದ್ರ ಸರ್ಕಾರ 4 ಕಾರ್ಮಿಕ ಸಂಹಿತೆಗಳ ಅನುಷ್ಠಾನಕ್ಕಾಗಿ ಕೇಂದ್ರ ನಿಯಮಗಳನ್ನು ಜಾರಿಗೆ ತರುವುದಾಗಿ ಘೋಷಿಸಿದೆ. ವ್ಯವಹಾರವನ್ನು ಸುಲಭೀಕರಿಸುವ ಹೆಸರಿನಲ್ಲಿ ಕಾರ್ಮಿಕ ವಿರೋಧಿ ಮತ್ತು ಮಾಲೀಕರ ಪರವಾದ ಈ ಕಾರ್ಮಿಕ ಸಂಹಿತೆಗಳನ್ನು ಕಾರ್ಮಿಕ ಸಂಘಟನೆಗಳು ನಿರಂತರವಾಗಿ ವಿರೋಧಿಸುತ್ತಿವೆ. ಹೀಗಾಗಿ ನಿಯಮಗಳನ್ನು ರದ್ದುಪಡಿಸುವಂತೆ ಆಗ್ರಹಿಸಿದರು.

ಫೆಬ್ರವರಿ 12ರಂದು ನಡೆದ ಐತಿಹಾಸಿಕ ಸಾರ್ವತ್ರಿಕ ಮುಷ್ಕರದ ನಂತರವೂ ಕೇಂದ್ರ ಸರ್ಕಾರ ಈ ವಿಷಯದಲ್ಲಿ ಯಾವುದೇ ಗಂಭೀರ ಚರ್ಚೆಗೆ ಮುಂದೆ ಬಂದಿಲ್ಲ. ಕಾರ್ಮಿಕ ಸಂಹಿತೆಗಳ ರಚನೆಯ ಹಂತದಿಂದಲೂ ಕಾರ್ಮಿಕ ಸಂಘಟನೆಗಳೊಂದಿಗೆ ಯಾವುದೇ ಸಮಾಲೋಚನೆ ನಡೆಸಿಲ್ಲ. ಈ ಕಾರ್ಮಿಕ ಸಂಹಿತೆಗಳು ಕಾರ್ಮಿಕರನ್ನು ಮತ್ತೆ ಬ್ರಿಟೀಷ್ ವಸಾಹತು ಕಾಲದ ಶೋಷಣಾತ್ಮಕ ಪರಿಸ್ಥಿತಿಗಳಿಗೆ ತಳ್ಳಲಿವೆ ಎಂದು ದೂರಿದರು.

ಈ ಕರಾಳ ಕಾರ್ಮಿಕ ಸಂಹಿತೆಯಲ್ಲಿ ಕಾರ್ಮಿಕರ ಸಂಘಟನೆಗೆ ಕಠಿಣ ನಿಯಮಗಳುನ್ನು ಅಳವಡಿಸಲಾಗಿದೆ. ಕಾರ್ಮಿಕ ಸಂಘಗಳ ನೋಂದಣಿ ಕಷ್ಟಕರ, ಅಲ್ಲದೆ ರದ್ದತಿ ಸುಲಭವಾಗಲಿದೆ. ಉದ್ಯೋಗದಾತರ ಕಾನೂನುಗಳ ಉಲ್ಲಂಘನೆಗಳನ್ನು ಅಪರಾಧವಲ್ಲದಂತೆ ಮಾಡುವುದಾಗಿದೆ. ಕಾರ್ಮಿಕ ಸಂಘಟನೆಗಳ ಚಟುವಟಿಕೆಗಳನ್ನು ಅಪರಾಧೀಕರಣ ಎಂದು ಬಿಂಬಿಸಲಾಗುತ್ತದೆ. ಕೆಲಸದ ಗಂಟೆಗಳಿಗೆ ಮಿತಿ ಇಲ್ಲದಂತೆ ಮಾಡುವುದಾಗಿದೆ. ಮುಷ್ಕರ ಹಕ್ಕು ಅಸಾಧ್ಯವಾಗುತ್ತದೆ. ಖಾಯಂ ಅವಧಿಯ ಉದ್ಯೋಗವನ್ನು ಇಲ್ಲವಾಗಿಸುವುದಾಗಿದೆ. ಸಾಮಾಜಿಕ ಭದ್ರತಾ ವ್ಯವಸ್ಥೆಯನ್ನು ದುರ್ಬಲಗೊಳಿಸುವುದಾಗಿದೆ ಎಂದು ಆರೋಪಿಸಿದರು.

ಕೇಂದ್ರ ಸರ್ಕಾರ ಕಾರ್ಮಿಕ ಸಂಹಿತೆಗಳು ಭಾರತೀಯ ಸಂವಿಧಾನದ ಆಶಯಕ್ಕೂ, ಅಂತಾರಾಷ್ಟ್ರೀಯ ಕಾರ್ಮಿಕ ಮಾನದಂಡಗಳಿಗೂ ಹಾಗು ಮಾನವ ಹಕ್ಕುಗಳಿಗೂ ವಿರುದ್ಧವಾಗಿವೆ ಎಂದು ಜೆಸಿಟಿಯು ಅಭಿಪ್ರಾಯ ಪಟ್ಟಿದೆ. ಈ ಹಿನ್ನಲೆಯಲ್ಲಿ, ಕಾರ್ಮಿಕ ಸಂಘಟನೆಗಳು ಹೋರಾಟ ಮುಂದುವರಿಸಲು ತೀರ್ಮಾನಿಸಿವೆ. ಕಾರ್ಮಿಕರ ಹಕ್ಕುಗಳು, ಸಂಘಟನೆ ಮತ್ತು ನ್ಯಾಯಸಮ್ಮತ ಹೋರಾಟದ ಹಕ್ಕುಗಳನ್ನು ಉಳಿಸಲು ಸಮಾಜದ ಎಲ್ಲಾ ವರ್ಗಗಳು ಬೆಂಬಲ ನೀಡಬೇಕೆಂದು ಮನವಿ ಮಾಡಿದರು.

ಸಿಐಟಿಯು ಜಿಲ್ಲಾಧ್ಯಕ್ಷ ಧರ್ಮೇಶ್, ಕೆಪಿಆರ್‌ಎಸ್ ಜಿಲ್ಲಾಧ್ಯಕ್ಷ ಹೆಚ್.ಆರ್. ನವೀನ್‌ಕುಮಾರ್, ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎಂ.ಬಿ.ಪುಷ್ಪ, ಡಿವೈಎಫ್‌ಐ ಜಿಲ್ಲಾ ಕಾರ್ಯದರ್ಶಿ ಎಂ.ಜಿ. ಪೃಥ್ವಿ, ಹೆಚ್.ಎನ್.ಪರಮಶಿವಯ್ಯ, ಹುಲಿಕಲ್ ರಾಜಶೇಖರ್ ಇದ್ದರು.

# ಏ. 7ರಂದು ಹೊಳೆನರಸೀಪುರದಲ್ಲಿ ಆರ್‌ಪಿಐ ಸಮಾವೇಶ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಹೊಳೆನರಸೀಪುರ: ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಕಟ್ಟಿದ ಏಕೈಕ ಪಕ್ಷ ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾದ ಅಭ್ಯುದಯಕ್ಕೆ ಎಲ್ಲ ಸಮುದಾಯದವರು ಕಟಿಬದ್ಧರಾಗಬೇಕು ಎಂದು ಆರ್‌ಪಿಐ ರಾಜ್ಯಾಧ್ಯಕ್ಷ ಸತೀಶ್ ತಿಳಿಸಿದರು.

ಪಟ್ಟಣದ ಪತ್ರಿಕಾ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಜಿಲ್ಲೆಯ ಪ್ರತಿ ತಾಲೂಕಿನಲ್ಲೂ ಪಕ್ಷಕ್ಕೆ ನೆಲೆಯನ್ನು ಸ್ಥಾಪಿಸಲಾಗುವುದು. ಈ ನಿಟ್ಟಿನಲ್ಲಿ ಏ.7 ರಂದು ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಪಕ್ಷದ ಬಲವರ್ಧನೆಗೆ ಕಾರ್ಯಕ್ರಮ ನಡೆಸಲಾಗುತ್ತಿದೆ. ಅಂದು ಹಲವು ಸಮುದಾಯದ ಮುಖಂಡರು ಪಕ್ಷ ಸಂಘಟನೆಗೆ ತೊಡಗಿಸಿಕೊಳ್ಳಲಿದ್ದಾರೆ. ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಅಧ್ಯಕ್ಷ ಡಾ.ವೆಂಕಟಸ್ವಾಮಿ, ರಾಜ್ಯ ಸಂಘಟಕ ಡಾ.ಆರ್.ಚಂದ್ರಶೇಖರ್, ಯುವ ಘಟಕದ ಅಧ್ಯಕ್ಷ ಪ್ರಶಾಂತ್ ಹಲವರು ಭಾಗವಹಿಸಲಿದ್ದಾರೆ ಎಂದರು.

ಸಮತಾವಾದ ಅಂಬೇಡ್ಕರ್‌ರ ಕನಸು ಅದರಂತೆ ಸಮಾನತೆಯ ಪರಿಕಲ್ಪನೆ ನಮ್ಮ ಸಂಘಟನೆ ಮತ್ತು ಪಕ್ಷದ ಜೀವಾಳವಾಗಲಿದೆ. ರಾಮದಾಸ್ ಅಟಾವಲೆ ಅವರು ಕೇಂದ್ರದಲ್ಲಿ ಮಂತ್ರಿಯಾಗಿದ್ದಾರೆ. ರಿಪಬ್ಲಿಕನ್ ಪಾರ್ಟಿ ಆಫ್ ಇಂಡಿಯಾದ ಅಧ್ಯಕ್ಷರಾಗಿದ್ದು, ಅವರ ನೇತೃತ್ವದಲ್ಲಿ ಸಮತಾ ಸೈನಿಕ ದಳ ಸಹ ಕಾರ್ಯ ನಡೆಸಿದೆ. ಸದ್ಯದಲ್ಲೇ ಪಟ್ಟಣದ ಬಸ್ ನಿಲ್ದಾಣ ಸಮೀಪವೇ ಪಕ್ಷದ ಕಚೇರಿ ತೆರೆಯಲಾಗುವುದು. ಈ ಮೂಲಕ ಶೋಷಿತರ ಮತ್ತು ಸಾಮಾಜಿಕ ನ್ಯಾಯ ಕೋರಿ ಹೋರಾಟ ನಡೆಸಲಾಗುವುದು ಎಂದರು.

ಆರ್‌ಪಿಐ ಜಿಲ್ಲಾಧ್ಯಕ್ಷ ನಿಟ್ಟೂರು ಬೂದೇಶ್, ಹಾಸನ ತಾಲೂಕು ಅಧ್ಯಕ್ಷ ರಂಜಿತ್ ಕುಮಾರ್, ಸಂಘಟಕರಾದ ಶಂಕರ್ ಮಾವನೂರು, ದೀಪಕ್ ತವನಂದಿ ಹಾಗೂ ಅನ್ನುರಾಜ್ ಹಾಜರಿದ್ದರು.

# ಮಹನೀಯರ ಜಯಂತಿ ಯಶಸ್ಸಿಗೆ ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಅರಕಲಗೂಡು: ಸಮಾಜ ಕಲ್ಯಾಣ ಇಲಾಖೆ ಮತ್ತು ತಾಲೂಕು ಆಡಳಿತ ವತಿಯಿಂದ ನಡೆಯುವ ಬಾಬು ಜಗಜೀವನ್ ರಾಂ ಮತ್ತು ಅಂಬೇಡ್ಕರ್ ಜಯಂತಿ ಆಚರಣೆ ಸಮಾರಂಭದಲ್ಲಿ ಸಮಾಜದ ಮುಖಂಡರು, ಎಲ್ಲಾ ಇಲಾಖೆ ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸುವ ಮೂಲಕ ಮಹನೀಯರನ್ನು ಗೌರವಿಸಬೇಕೆಂದು ಶಾಸಕ ಎ.ಮಂಜು ಸೂಚನೆ ನೀಡಿದರು.

ತಾಲೂಕು ಕಚೇರಿ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ಏ. 5ರಂದು ಪಟ್ಟಣದ ದೇವರಾಜು ಅರಸು ಭವನದಲ್ಲಿ ಬಾಬು ಜಗಜೀವನ್ ರಾಂ ಅವರ 119ನೇ ಜಯಂತಿ ಆಚರಣೆ ನಡೆಯಲಿದೆ. ಈ ಕಾರ್ಯಕ್ರಮದಲ್ಲಿ ಅಧಿಕಾರಿಗಳು,ಸಾರ್ವಜನಿಕರು ಭಾಗವಹಿಸಿ ಯಶಸ್ವಿಗೊಳಿಸಬೇಕಿದೆ. ಏ. 14ರಂದು ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತಿ ತಾಲೂಕು ಕಚೇರಿ ಆವರಣದಲ್ಲಿ ಜರುಗಲಿದೆ. ವಿಶೇಷವಾಗಿ ನೂತನವಾಗಿ ನಿರ್ಮಾಣಗೊಂಡಿರುವ ತಾಲೂಕು ಕಚೇರಿ ಆವರಣದಲ್ಲಿನ ಅಂಬೇಡ್ಕರ್ ಅವರ ಪ್ರತಿಮೆ ಗೋಪುರ ಉದ್ಘಾಟನೆ ಹಾಗೂ ಬೃಹತ್ ವೇದಿಕೆ ಸಮಾರಂಭ ಆಯೋಜನೆ ಮಾಡಲಾಗಿದೆ. ಇದಕ್ಕೂ ಮುನ್ನ ಅನಕೃ ವೃತ್ತದಿಂದ ಅಂಬೇಡ್ಕರ್ ಅವರ ಭಾವಚಿತ್ರ ಮೆರವಣಿಗೆ 135 ಕುಂಭ ಕಳಸ, ಕಲಾ ತಂಡಗಳೊಂದಿಗೆ ನಡೆಯಲಿದೆ. ವಿಶ್ವಚೇತನ ಚಾರಿಟಬಲ್ ಟ್ರಸ್ಟ್ ವತಿಯಿಂದ ಬೃಹತ್ ರಕ್ತದಾನ ಶಿಬಿರ ಕೂಡ ನಡೆಯಲಿದೆ. ಈ ಕಾರ್ಯಕ್ರಮದ ಉಸ್ತುವಾರಿಯನ್ನು ತಾಲೂಕು ಆರೋಗ್ಯ ಅಧಿಕಾರಿ, ಸಿಬ್ಬಂದಿ ನೋಡಿಕೊಳ್ಳಬೇಕು. ಇದಕ್ಕಾಗಿ ಇದೇ ಆವರಣದಲ್ಲಿ ಪ್ರತ್ಯೇಕವಾಗಿ ಶಾಮಿಯಾನ ವ್ಯವಸ್ಥೆಯನ್ನು ಮಾಡಿಕೊಡಬೇಕೆಂದು ಅಧಿಕಾರಿಗಳಿಗೆ ಅವರು ಕಟ್ಟುನಿಟ್ಟಿನ ಸೂಚನೆ ಕೊಟ್ಟರು.

ಈ ಎರಡು ಕಾರ್ಯಕ್ರಮಗಳಲ್ಲಿ ಪ್ರತಿಭಾನ್ವಿತ ವಿದ್ಯಾರ್ಥಿಗಳು, ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿರುವವರಿಗೆ ಗೌರವ ಸಮರ್ಪಣೆ, ವಿಶೇಷವಾಗಿ ಉಪನ್ಯಾಸ ಹಮ್ಮಿಕೊಳ್ಳಲಾಗಿದೆ. ಈ ಇಬ್ಬರು ಮಹನೀಯರ ಜಯಂತಿ ಆಚರಣೆ ಕಾರ್ಯಕ್ರಮ ಹಬ್ಬವಾಗಿ ಜರುಗಲು ಸಮಾಜದ ಮುಖಂಡರು, ಚುನಾಯಿತ ಮಾಜಿ, ಹಾಲಿ ಸದಸ್ಯರು, ಗ್ರಾಪಂ ಆಡಳಿತದಿಂದಲೂ ಜನರನ್ನು ಕರೆತರುವ ಕೆಲಸ ಹಾಗೂ ಅಂಗನವಾಡಿ, ಆಶಾ ಕಾರ್ಯಕರ್ತರು, ಮಹಿಳಾ ಸಂಘಟನೆಗಳ ಕಾರ್ಯಕರ್ತರು, ಧರ್ಮಸ್ಥಳ ಸ್ತ್ರೀ ಶಕ್ತಿ ಸಂಘಟನೆಗಳ ಮಹಿಳೆಯರನ್ನು ಆಹ್ವಾನಿಸಲು ಕ್ರಮವಹಿಸಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಿದರು.

ತಹಸೀಲ್ದಾರ್ ಕೆ.ಸಿ.ಸೌಮ್ಯ ಮಾತನಾಡಿದರು. ದಲಿತ ಸಂಘಟನೆಗಳ ಮುಖಂಡರು, ವಿವಿಧ ಇಲಾಖೆ ಅಧಿಕಾರಿ, ಸಿಬ್ಬಂದಿ ಹಾಜರಿದ್ದರು.

# ಹೊರಗುತ್ತಿಗೆ ನೌಕರರ ಕೈ ಬಿಡುವುದು ಅವೈಜ್ಞಾನಿಕ ನಿರ್ಧಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಹಾಸನ: ಹೊರಗುತ್ತಿಗೆ, ಒಪ್ಪಂದದ ಅವಧಿ ಪೂರ್ಣಗೊಂಡ ನಂತರ ಸಿಬ್ಬಂದಿಯನ್ನು ಮುಂದುವರೆಸದಂತೆ ಆರ್ಥಿಕ ಇಲಾಖೆ ಇತ್ತೀಚೆಗೆ ಹೊರಡಿಸಿದ್ದ ಆದೇಶದಿಂದ ರಾಜ್ಯಾದ್ಯಂತ ಸಾವಿರಾರು ನೌಕರರು ಕೆಲಸ ಕಳೆದುಕೊಳ್ಳುವ ಆತಂಕ ಎದುರಾಗಿದೆ ಎಂದು ಹೊರಗುತ್ತಿಗೆ ನೌಕರರ ಸಂಘದ ರಾಜ್ಯಾಧ್ಯಕ್ಷ ಅಕ್ಷಯ್ ಡಿ.ಎಂ.ಗೌಡ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹೊರಗುತ್ತಿಗೆ ನೌಕರರ ವಿರುದ್ಧದ ಆದೇಶಕ್ಕೆ ರಾಜ್ಯಾದ್ಯಂತ ತೀವ್ರ ವಿರೋಧ ಜೊತೆಗೆ ಆಕ್ರೋಶ ವ್ಯಕ್ತವಾಗುತ್ತಿದೆ. ಈ ಆದೇಶ ಜಾರಿಗೆ ಬಂದರೆ ಹಲವು ವರ್ಷಗಳಿಂದ ವಿವಿಧ ಸರ್ಕಾರಿ ಇಲಾಖೆಗಳಲ್ಲಿಯೇ ಸೇವೆ ಸಲ್ಲಿಸುತ್ತಿರುವ ನೌಕರರು ಏಕಾಏಕಿ ಕೆಲಸ ಕಳೆದುಕೊಳ್ಳುತ್ತಾರೆ. ಇದರಿಂದ ಅವರ ಕುಟುಂಬಗಳ ಜೀವನವೇ ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆ ಇದೆ ಎಂದು ಹೇಳಿದರು.

ಅನೇಕ ನೌಕರರು ಈಗಾಗಲೇ ಸಾಲಬಾಧೆ, ಮಕ್ಕಳ ವಿದ್ಯಾಭ್ಯಾಸ ಹಾಗೂ ಕುಟುಂಬದ ನಿರ್ವಹಣೆಗಾಗಿ ಈ ಉದ್ಯೋಗದ ಮೇಲೆ ಅವಲಂಬಿತರಾಗಿದ್ದಾರೆ. ಸರ್ಕಾರದ ಈ ಕ್ರಮ ಮಾನವೀಯತೆಯ ಕೊರತೆ ತೋರಿಸುತ್ತದೆ. ಮಾ.24 ರಂದೇ ಆದೇಶ ಹೊರಡಿಸಿ ಈಗ ಸುಳ್ಳು ಆದೇಶ ಎಂದು ದೂರು ಕೊಟ್ಟಿರುವುದನ್ನು ಹೇಗೆ ನಂಬುವುದು ಎಂದು ಪ್ರಶ್ನಿಸಿದರು.

ಹೊರಗುತ್ತಿಗೆ ಪದ್ಧತಿ ಸರಿಪಡಿಸುವ ಬದಲು ನೌಕರರ ಹಿತಾಸಕ್ತಿಯನ್ನು ಕಡೆಗಣಿಸುವಂತಹ ಕ್ರಮಗಳನ್ನು ಕೈಗೊಳ್ಳುವುದು ಸರಿಯಲ್ಲ. ಸಂಘದ ಪದಾಧಿಕಾರಿಗಳು ಸರ್ಕಾರದ ಈ ಆದೇಶವನ್ನು ತಕ್ಷಣವೇ ಹಿಂತೆಗೆದುಕೊಳ್ಳಬೇಕು, ಇಲ್ಲವಾದಲ್ಲಿ ರಾಜ್ಯದ ಎಲ್ಲಾ ಇಲಾಖೆಗಳ ಹೊರಗುತ್ತಿಗೆ ನೌಕರರು ಒಗ್ಗಟ್ಟಾಗಿ ಬೃಹತ್ ಮಟ್ಟದ ಹೋರಾಟಕ್ಕೆ ಇಳಿಯಲಿದ್ದಾರೆ.

ಅಗತ್ಯವಿದ್ದರೆ ಮುಷ್ಕರ, ಪ್ರತಿಭಟನೆ ಹಾಗು ರಾಜ್ಯವ್ಯಾಪಿ ಆಂದೋಲನಗಳನ್ನು ಹಮ್ಮಿಕೊಳ್ಳುವುದಾಗಿ ತಿಳಿಸಿದರು.

ಶೀಘ್ರದಲ್ಲೇ ರಾಜ್ಯದ ಎಲ್ಲಾ ಹೊರಗುತ್ತಿಗೆ ನೌಕರರ ಸಂಘಗಳ ಮಹಾಸಭೆಯನ್ನು ಕರೆಯಲಾಗುವುದು. ಈ ಸಭೆಯಲ್ಲಿ ಮುಂದಿನ ಹೋರಾಟದ ರೂಪರೇಖೆ ರೂಪಿಸಿ, ಬೃಹತ್ ಮಟ್ಟದ ಪ್ರತಿಭಟನೆಗೆ ಸಿದ್ಧತೆ ಕೈಗೊಳ್ಳಲಾಗುವುದು. ಹೊರಗುತ್ತಿಗೆ ನೌಕರರ ಭವಿಷ್ಯವನ್ನು ಹಾಳು ಮಾಡುವ ಯಾವುದೇ ಕ್ರಮವನ್ನು ಸಹಿಸಲಾಗುವುದಿಲ್ಲ. ಮುಂದಿನ ದಿನಗಳಲ್ಲಿ ಸರ್ಕಾರ ತನ್ನ ನಿರ್ಧಾರವನ್ನು ಬದಲಿಸದೇ ಇದ್ದರೆ, ನೌಕರರು ಜನತಾಂತ್ರಿಕ ರೀತಿಯಲ್ಲಿ ತಮ್ಮ ಅಸಮಾಧಾನ ವ್ಯಕ್ತಪಡಿಸಿ, ಮುಂದಿನ ಚುನಾವಣೆಯಲ್ಲಿ ತಕ್ಕ ಉತ್ತರ ನೀಡುವುದಾಗಿ ಎಚ್ಚರಿಕೆ ನೀಡಿದ ಅವರು, ಮೇ ತಿಂಗಳಲ್ಲಿ ಮೊದಲ ವಾರ ಹಾಸನದಲ್ಲೇ ನಮ್ಮ ಸಮಾವೇಶ ನಡೆಸಿ ಶಕ್ತಿ ಪ್ರದರ್ಶನ ಮೂಲಕ ರಾಜ್ಯ ಸರ್ಕಾರದ ಮೇಲೆ ಒತ್ತಡ ಹೇರಲಾಗುವುದು ಎಂದರು.

ಪದಾಧಿಕಾರಿಗಳಾದ ಲೋಕೇಶ್, ವಿರೇಶ್, ವೀಣಾ, ರಾಜಯ್ಯ, ಶಾಂತಕುಮಾರ್, ಸುದರ್ಶನ್ ಉಪಸ್ಥಿತರಿದ್ದರು.

# ಆಲೂರಿನ ಪ್ರಿಯಾಂಕ ಖಾಸಗಿ ಕ್ಲಿನಿಕ್‌ಗೆ ಬೀಗ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಆಲೂರು: ಪಟ್ಟಣದಲ್ಲಿ ಅನಧಿಕೃತವಾಗಿ ಕಾರ್ಯನಿರ್ವಹಿಸುತ್ತಿದ್ದ ಪ್ರಿಯಾಂಕ ಕ್ಲಿನಿಕ್‌ಗೆ ಬುಧವಾರ ತಾಲ್ಲೂಕು ಆರೋಗ್ಯಾಧಿಕಾರಿ ಡಾ. ನಿಸಾರ್ ಫಾತಿಮಾ ಬೀಗ ಹಾಕಿಸಿದರು.

ಅಧಿಕೃತ ಪ್ರಮಾಣ ಪತ್ರ, ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ಅನುಮತಿ ಪಡೆಯದೆ ಸೇವೆ ಸಲ್ಲಿಸುತ್ತಿದ್ದ ಕ್ಲಿನಿಕ್ ಶಾಪ್ ವಿರುದ್ಧ ಸಾರ್ವಜನಿಕರಿಂದ ನಿರಂತರ ದೂರು ಬಂದ ಹಿನ್ನಲೆಯಲ್ಲಿ ಮೇಲಾಧಿಕಾರಿಗಳ ನಿರ್ದೇಶನದಂತೆ ಬೀಗ ಹಾಕಲಾಗಿದೆಯೆಂದು ಅವರು ಹೇಳಿದರು.

ನಾವು ಭೇಟಿ ನೀಡಿದಾಗ ಇದು ನಕಲಿ ಕ್ಲಿನಿಕ್‌ಎಂಬ ಸಂಶಯ ವ್ಯಕ್ತವಾಗಿತ್ತು. ಅಗತ್ಯ ದಾಖಲೆ ಒದಗಿಸುವಂತೆ ನೋಟೀಸ್ ಜಾರಿ ಮಾಡಿದ್ದರೂ ಪ್ರತಿಕ್ರಿಯೆ ಬಂದಿರಲಿಲ್ಲ. ಯಾವುದೇ ಕ್ಲಿನಿಕ್ ಆರಂಭಿಸಬೇಕೆಂದರೆ ಕರ್ನಾಟಕ ಖಾಸಗಿ ವೈದ್ಯಕೀಯ ಅಧಿನಿಯಮ 2007 ಹಾಗು 2017ರ ನಿಯಮದನ್ವಯ ನೋಂದಣಿ ಆಗಿರಬೇಕು. ಅಲೋಪತಿ ಆಸ್ಪತ್ರೆಗಳ ಫಲಕ ನೀಲಿ ಬಣ್ಣ ಹಾಗು ಆಯುರ್ವೇದಿಕ್ ಆಸ್ಪತ್ರೆಗಳ ಫಲಕ ಹಸಿರು ಬಣ್ಣದಲ್ಲಿರಬೇಕು. ಆದರೆ ಆ ನಿಯಮ ಪಾಲಿಸಿಲ್ಲ. ಜೊತೆಗೆ ಆಸ್ಪತ್ರೆಯಲ್ಲಿನ ತ್ಯಾಜ್ಯ ವಿಲೇವಾರಿಯನ್ನು ನಿಯಮಾನಸಾರ ಮಾಡುತ್ತಿರಲಿಲ್ಲ. ಇದನ್ನೆಲ್ಲ ಗಮನದಲ್ಲಿಟ್ಟುಕೊಂಡು ಕ್ರಮ ವಹಿಸಲಾಗಿದೆ ಎಂದರು.

# ತಂಬಾಕಿಗೆ ವೈಜ್ಞಾನಿಕ ಬೆಲೆಗೆ ಆಗ್ರಹಿಸಿ ಇಂದಿನಿಂದ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಅರಕಲಗೂಡು: ತಂಬಾಕು ಬೆಳೆಗಾರರಿಗೆ ಸರಿಯಾದ ಬೆಲೆ ನೀಡದೆ ತಂಬಾಕು ಮಂಡಳಿ ಮತ್ತು ಕಂಪನಿಗಳು ಬೆಳೆಗಾರರನ್ನು ವಂಚಿಸುತ್ತಿದ್ದು ಅದನ್ನು ವಿರೋಧಿಸಿ ಏ .3 ರಂದು ಬೆಳಿಗ್ಗೆ 11 ಗಂಟೆಯಿಂದ ಭಾರತೀಯ ಕಿಸಾನ್ ಸಂಘ ಮತ್ತು ತಂಬಾಕು ಬೆಳೆಗಾರರು ಅಹೋರಾತ್ರಿ ಧರಣಿ ಹಮ್ಮಿಕೊಂಡಿರುವುದಾಗಿ ಕಿಸಾನ್ ಸಂಘದ ತಾಲೂಕು ಘಟಕದ ಅಧ್ಯಕ್ಷ ಬಂದಿಗನಹಳ್ಳಿ ರವಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ತಂಬಾಕು ಮಂಡಳಿ ವಹಿವಾಟು ಆರಂಭಿಸಿ 6 ತಿಂಗಳು ಕಳೆದರೂ ಇನ್ನೂ ಅರ್ಧಷ್ಟು ತಂಬಾಕು ಮಾರಾಟ ಕಂಡಿಲ್ಲ. ಬೆಳೆಗಾರರು ಮಂಡಳಿಗೆ ತರುವ ತಂಬಾಕನ್ನು ಕಂಪನಿಗಳು ತಮಗೆ ಬೇಕಾದ್ದನ್ನು ಇಷ್ಟಬಂದಷ್ಟು ದರ ನಿಗದಿ ಮಾಡಿಕೊಳ್ಳುತ್ತಿವೆ. ಬೆಳೆಗಾರರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದರೂ ಮಂಡಳಿ ರೈತರಿಗೆ ನ್ಯಾಯ ದೊರಕಿಸಿಕೊಡಲು ವಿಫಲವಾಗಿದೆ. ಇದನ್ನು ವಿರೋಧಿಸಿ ಪ್ರತಿಭಟನೆ ಹಮ್ಮಿಕೊಂಡಿದ್ದು ಎಲ್ಲ ರೈತ ಪರ ಸಂಘಟನೆಗಳು, ಬೆಳೆಗಾರರೂ ಪ್ರತಿಭಟನೆಯಲ್ಲಿ ಪಾಲ್ಗೊಳ್ಳುವ ಮೂಲಕ ಬೆಳೆಗಾರರಿಗೆ ನ್ಯಾಯ ದೊರಕಿಸಿಕೊಡಲು ಸಹಕರಿಸುವಂತೆ ಮನವಿ ಮಾಡಿದರು.

ಭಾರತೀಯ ಕಿಸಾನ್ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಸೀಬಳ್ಳ ಯೋಗಣ್ಣ ಮಾತನಾಡಿ, ಕಳೆದ ವರ್ಷದ ಅ. 10 ರಂದು ತಂಬಾಕು ವಹಿವಾಟು ಪ್ರಾರಂಭವಾಗಿದ್ದು ಈ ವರೆಗೆ ಬೆಲೆ ಸ್ಥಿರತೆ ಕಂಡುಕೊಂಡಿಲ್ಲ. ಪ್ರಾರಂಭದಲ್ಲಿ ಆಂಧ್ರದಲ್ಲಿ 450 ರೂ. ದರ ನಿಗದಿಯಾದರೆ ಕರ್ನಾಟಕದಲ್ಲಿ 350 ರೂ. ನಿಗದಿಯಾಗಿತ್ತು. ಬಳಿಕ ದಿನೇ, ದಿನೇ ದರ ಕುಸಿಯುತ್ತಲೆ ಸಾಗುತ್ತಿದೆ. ಹಾಸನ ಮತ್ತು ಮೈಸೂರು ಜಿಲ್ಲೆಗಳ ಜನಪ್ರತಿನಿಧಿಗಳು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರ ನೇತೃತ್ವದಲ್ಲಿ ಕೇಂದ್ರ ವಾಣಿಜ್ಯ ಸಚಿವರನ್ನು ಭೇಟಿ ಮಾಡಿ ಸಮಸ್ಯೆ ಪರಿಹಾರಕ್ಕೆ ಮಾತುಕತೆ ನಡೆಸಿದರೂ ಫಲಪ್ರದವಾಗಿಲ್ಲ. ಸಂಸದ ಯದುವೀರ ಕೃಷ್ಣದತ್ತ ಒಡೆಯರ್ ಮತ್ತು ಶ್ರೇಯಸ್ ಪಟೇಲ್ ಸಂಸತ್‌ನಲ್ಲಿ ಸಮಸ್ಯೆ ಬಗ್ಗೆ ಗಮನ ಸಳೆದರೂ ಪ್ರಯೋಜನವಾಗಿಲ್ಲ. ಹೀಗಾಗಿ ಬೆಳೆಗಾರರು ಹೋರಾಟದ ಹಾದಿ ಹಿಡಿಯಬೇಕಾಗಿದೆ. ಸಂಸತ್ ಹಾಗೂ ಸದಸನದಲ್ಲಿ ನ್ಯಾಯ ದೊರಕಿಸಲು ಸಾಧ್ಯವಾಗದ ಜನಪ್ರತಿಗಳು ಹೋರಾಟದ ಹಾದಿ ಹಿಡಿದಿರುವ ರೈತರೊಂದಿಗೆ ಸೇರಿ ಪ್ರತಿಭಟನೆ ಮೂಲಕ ಪರಿಹಾರ ದೊರಕಿಸಲು ನೆರವಾಗಬೇಕು. ವಾರ್ಷಿ ರೂ 45 ಸಾವಿರ ಕೋಟಿ ವಿದೇಶಿ ವಿನಿಮಯ ಗಳಿಸುವ ತಂಬಾಕು ಬೆಳೆಗಾರರ ಸಮಸ್ಯೆ ಕುರಿತು ಕೇಂದ್ರ ಸರ್ಕಾರ, ವಾಣಿಜ್ಯ ಇಲಾಖೆ ಹಾಗೂ ತಂಬಾಕು ಮಂಡಳಿ ಗಮನ ಹರಿಸದೆ ನಿರ್ಲಕ್ಷ್ಯ ತೋರುತ್ತಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮುಖಂಡರಾದ ಮಂಜಣ್ಣ, ವಿರೇಂದ್ರ, ಸಂಜು, ವೇದಾನಂದ ಇದ್ದರು.

# ದೇಶದ ಭವಿಷ್ಯಕ್ಕಾಗಿ ಜನಗಣತಿಯಲ್ಲಿ ಪಾಲ್ಗೊಳ್ಳುವುದು ಕರ್ತವ್ಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಸಕಲೇಶಪುರ: ದೇಶದ ಅಭಿವೃದ್ಧಿ ಹಾಗೂ ಭವಿಷ್ಯದ ದೃಷ್ಟಿಯಿಂದ ಪ್ರತಿಯೊಬ್ಬ ನಾಗರಿಕ ಸ್ವಯಂ ಜನಗಣತಿಯಲ್ಲಿ ಪಾಲ್ಗೊಳ್ಳುವುದು ಆದ್ಯ ಕರ್ತವ್ಯ ಮತ್ತು ಜವಾಬ್ದಾರಿಯಾಗಿದೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದ ಆವರಣದಲ್ಲಿ ಹಮ್ಮಿಕೊಂಡಿದ್ದ ‘ಜನಗಣತಿ–2026’ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಭಾರತ ಸರ್ಕಾರವು ಏಪ್ರಿಲ್ 1ರಿಂದ ಜನಗಣತಿ ಪ್ರಕ್ರಿಯೆ ಆರಂಭಿಸಿದೆ. ಇದು ಕೇವಲ ಅಂಕಿ ಅಂಶಗಳ ಸಂಗ್ರಹವಲ್ಲ. ಬದಲಿಗೆ ನಮ್ಮ ರಾಜ್ಯ ಮತ್ತು ದೇಶದ ಭವಿಷ್ಯದ ನಕಾಶೆಯನ್ನು ರೂಪಿಸುವ ಮಹತ್ವದ ಕಾರ್ಯಕ್ರಮವಾಗಿದೆ. ವಿಶೇಷವಾಗಿ ಆರೋಗ್ಯ, ಶಿಕ್ಷಣ ಹಾಗೂ ಮೂಲಭೂತ ಸೌಕರ್ಯ ಸಮರ್ಪಕವಾಗಿ ಜನರಿಗೆ ತಲುಪಿಸುವ ನಿಟ್ಟಿನಲ್ಲಿ ಈ ಗಣತಿಯು ಪ್ರಮುಖ ಪಾತ್ರ ವಹಿಸಲಿದೆ ಎಂದರು.

ಜನಗಣತಿಯ ಮೊದಲ ಹಂತದಲ್ಲಿ ನಾಗರಿಕರು ತಾವಾಗಿಯೇ ಮಾಹಿತಿ ದಾಖಲಿಸಲು ಅವಕಾಶವಿದ್ದು, ಏ. 1 ರಿಂದ 15ರ ವರೆಗೆ ಸಾರ್ವಜನಿಕರು ವೆಬ್‌ಸೈಟ್‌ಗೆ ಲಾಗಿನ್ ಆಗಿ ತಮ್ಮ ಮೊಬೈಲ್ ಮೂಲಕವೇ ಕುಟುಂಬದ ಮಾಹಿತಿಯನ್ನು ಅಪ್‌ಲೋಡ್ ಮಾಡಬಹುದು. ನಾಗರಿಕರು ನೀಡುವ ಮಾಹಿತಿ ಸಂಪೂರ್ಣ ಸುರಕ್ಷಿತವಾಗಿದ್ದು, ಯಾವುದೇ ಆತಂಕವಿಲ್ಲದೆ ಪ್ರತಿಯೊಬ್ಬರೂ ಈ ರಾಷ್ಟ್ರೀಯ ಕಾರ್ಯಕ್ರಮದಲ್ಲಿ ಭಾಗಿಯಾಗಬೇಕು ಎಂದು ಅವರು ಮನವಿ ಮಾಡಿದರು.

ಪುರಸಭಾ ಮುಖ್ಯಾಧಿಕಾರಿ ಮಹೇಶ್ವರಪ್ಪ ಮಾತನಾಡಿ, ಪಟ್ಟಣ ಹಾಗೂ ಗ್ರಾಮೀಣ ಪ್ರದೇಶದ ಎಲ್ಲಾ ನಾಗರಿಕರು ತಮ್ಮ ಕುಟುಂಬದ ಮಾಹಿತಿಯನ್ನು ನಿಖರವಾಗಿ ದಾಖಲಿಸುವ ಮೂಲಕ ಈ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು. ಸ್ವಯಂ ಗಣತಿ ಪೂರ್ಣಗೊಳಿಸಿದ ನಂತರ ಸಿಗುವ ಐಡಿಯನ್ನು ಸುರಕ್ಷಿತವಾಗಿಟ್ಟುಕೊಳ್ಳಬೇಕು. ಏಪ್ರಿಲ್ 16ರಿಂದ ಗಣತಿದಾರರು ಮನೆ–ಮನೆಗೆ ಭೇಟಿ ನೀಡಿದಾಗ ಅವರಿಗೆ ಸೂಕ್ತ ಮಾಹಿತಿ ನೀಡಿ ಸಹಕರಿಸಬೇಕು ಎಂದು ಕೋರಿದರು.

ತಾಲೂಕು ಚುನಾವಣಾ ಶಾಖೆಯ ಗ್ರೇಡ್–2 ತಹಶೀಲ್ದಾರ್ ಜನಾರ್ದನ್, ಕಂದಾಯ ನಿರೀಕ್ಷಕ ದಾನ್ ಪ್ರಕಾಶ್, ಪುರಸಭಾ ಸಿಬ್ಬಂದಿ ಸುಂದರೇಶ್, ಗಂಗಾಧರ್, ವರದರಾಜ್, ರೇವಣ್ಣ ಇತರರಿದ್ದರು.

# ಇತಿಹಾಸದಲ್ಲಿ ಈ ದಿನ

## ಏಪ್ರಿಲ್-03

1948: ಅಮೆರಿಕಾದ ಅಧ್ಯಕ್ಷ ಹ್ಯಾರಿ ಎಸ್. ಟ್ರೂಮನ್ ಅವರು ಮಾರ್ಷಲ್ ಪ್ಲಾನ್‌ಗೆ ಸಹಿ ಹಾಕಿದರು.
1973: ಮಾರ್ಟಿನ್ ಕೂಪರ್ ಮೊದಲ ಬಾರಿಗೆ ಮೊಬೈಲ್ ಫೋನ್ ಕರೆ ಮಾಡಿದರು.
1984: ರಾಕೇಶ್ ಶರ್ಮಾ ಅಂತರಿಕ್ಷಕ್ಕೆ ಹೋದ ಮೊದಲ ಭಾರತೀಯ.

**ಜನನ**

1680: ಶಿವಾಜಿ, ಮರಾಠಾ ಸಾಮ್ರಾಜ್ಯದ ರಾಜ
1924: ಮಾರ್ಲನ್ ಬ್ರಾಂಡೋ, ಪ್ರಸಿದ್ಧ ನಟ
1962: ಜಯಪ್ರದಾ, ಭಾರತೀಯ ಸಿನಿ ನಟಿ

**ಮರಣ**

1680: ಛತ್ರಪತಿ ಶಿವಾಜಿ ಮಹಾರಾಜ
1991: ಗ್ರಾಹಮ್ ಗ್ರೀನ್, ಖ್ಯಾತ ಲೇಖಕ

# ಪುಷ್ಪಗಿರಿ ಕಲ್ಯಾಣ ಮಂಟಪ ಪುನಾರಂಭ



ಹಳೇಬೀಡು: ಬಾಗಿಲು ಮುಚ್ಚಿದ್ದ ಪುಷ್ಪಗಿರಿ ಬೆಟ್ಟದ ಮಲ್ಲಿಕಾರ್ಜುನ ಸ್ವಾಮಿ ದೇವಾಲಯದ ಕಲ್ಯಾಣ ಮಂಟಪ ಪುನಃ ಆರಂಭವಾಯಿತು.

ಪುಷ್ಪಗಿರಿಯ ಶ್ರೀ ಸೋಮಶೇಖರ ಸ್ವಾಮೀಜಿ ಹಾಗೂ ಶಾಸಕ ಎಚ್.ಕೆ.ಸುರೇಶ್, ತಹಶೀಲ್ದಾರ್ ಶ್ರೀಧರ ಕಂಕಣವಾಡಿ ಕಲ್ಯಾಣ ಮಂಟಪದ ಬಾಗಿಲು ಪೂಜೆ ನೆರವೇರಿಸಿದರು.

ನಂತರ ಶಾಸಕ ಎಚ್.ಕೆ.ಸುರೇಶ್ ಮಾತನಾಡಿ, ಪುಷ್ಪಗಿರಿಯ ದೇವಾಸ್ಥಾನ ಹಾಗೂ ಮಠ ಒಂದೆ ಭಾವನೆಯಿಂದ ಮುನ್ನೆಡಸಬೇಕು. ದೇವಸ್ಥಾನದ ಕಲ್ಯಾಣ ಮಂಟಪವನ್ನು ಮುಜಾರಾಯಿ ಹಾಗೂ ಕಂದಾಯ ಇಲಾಖೆ ನಿರ್ವಹಿಸುತ್ತದೆ. ಕಲ್ಯಾಣ ಮಂಟಪದಲ್ಲಿ ಸೌಲಭ್ಯಗಳನ್ನು ನೀಡಿ ವಿವಾಹ ಮೊದಲಾದ ಶುಭಕಾರ್ಯ ನಡೆಸುವವರಿಗೆ ಸೌಲಭ್ಯ ಕಲ್ಪಿಸಬೇಕು ಎಂದು ಕಂದಾಯ ಇಲಾಖೆಯವರಿಗೆ ಸೂಚಿಸಿದರು.

ಸೋಮಶೇಖರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಸಾಮಾಜಿಕ ಸಹಕಾರದಿಂದ ಅಭಿವೃದ್ಧಿಗೆ ಅನುಕೂಲವಾಗುತ್ತದೆ. ಸದುದ್ದೇಶದಿಂದ ದೇವಸ್ಥಾನದ ಕಲ್ಯಾಣ ಮಂಟಪ ನಿರ್ಮಾಣವಾಗಿದೆ. ಇನ್ನೂ ಮುಂದೆ ಕಲ್ಯಾಣ ಮಂಟಪ ಸಾರ್ವಜನಿಕರಿಗೆ ಉಪಯೋಗವಾಗಲಿದೆ. ಎಲ್ಲರಿಗೂ ಒಳ್ಳೆಯದಾಗಲಿ ಎಂದರು.

ತಹಶಿಲ್ದಾರ್ ಶ್ರೀಧರ ಕಂಕಣವಾಡಿ ಮಾತನಾಡಿ, ಎಲ್ಲರ ಒತ್ತಡ ಹಾಗೂ ಸಾಮಾಜಿಕ ಕಳಕಳಿಯಿಂದ ಕಲ್ಯಾಣ ಮಂಟಪವನ್ನು ಪುನಾರಾಂಬಿಸಲಾಗಿದೆ. ಕಡಿಮೆ ಬಾಡಿಗೆಯಲ್ಲಿ ಕಲ್ಯಾಣ ಮಂಟಪ ಬಾಡಿಗೆ ಕೊಡಲಾಗುವುದು. ಶೀಘ್ರದಲ್ಲಿಯೇ ಧರ ನಿಗದಿಪಡಿಸಲಾಗುವುದು ಎಂದರು.

ಪುಷ್ಪಗಿರಿ ದಾಸೋಹ ಸಮಿತಿ ಅಧ್ಯಕ್ಷ ಸೋಮಸುಂದರ್, ಕಾರ್ಯದರ್ಶಿ ಸಂಗಮ್, ರಾಜಸ್ವ ನಿರೀಕ್ಷಕ ರಮೇಶ್, ಗ್ರಾಮ ಆಡಳಿತಾಧಿಕಾರಿ ಮಹೇಶ್ ಹದ್ದಣ್ಣನವರ್ ಹಾಗೂ ಅರ್ಚಕ ವೃಂದದವರು ಭಾಗವಹಿಸಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248